## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1457 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ.ಎನ್.ಜವರಾಯಿ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18.12.2025 |
| ಉತ್ತರಿಸುವ ಸಚಿವರು | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜಧಾನಿಯಲ್ಲಿರುವ ಹೈಕೋರ್ಟ್ ಕಟ್ಟಡದ ಸ್ಥಳಾವಕಾಶವು ಚಿಕ್ಕದಿರುವುದರಿಂದ ಈ ಕಟ್ಟಡವನ್ನು ಬೇರೆಡೆಗೆ ಸ್ಥಳಾಂತರಿಸಲು ರಾಜ್ಯದ ಹೈಕೋರ್ಟ್‌ನ ಮಾನ್ಯ ಮುಖ್ಯ ನ್ಯಾಯಮೂರ್ತಿಗಳು ಮತ್ತು ವಕೀಲ ವೃಂದದವರು ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಆ) | ಹಾಗಿದ್ದಲ್ಲಿ, ಸಿಟಿ ಸಿವಿಲ್ ಕೋರ್ಟ್ ಹಾಗೂ ಇನ್ನಿತರೆ ನ್ಯಾಯಾಲಯಗಳಿಗೆ ಹತ್ತಿರವಿರುವ ಹಾಗೂ ಕಕ್ಷಿದಾರರು ಮತ್ತು ವಕೀಲರಿಗೆ ಅನುಕೂಲವಾಗುವಂತೆ ನಗರ ಮಧ್ಯದಲ್ಲಿರುವ ಯಾವ ಸ್ಥಳವನ್ನು ಗುರುತಿಸಲು ಸರ್ಕಾರ ನಿರ್ಣಯ ಮಾಡಿದೆ; (ಮಾಹಿತಿಯೊಂದಿಗೆ ವಿವರಣೆ ನೀಡುವುದು) | ಅನ್ವಯಿಸುವುದಿಲ್ಲ |
| ಇ) | ರೇಸ್‌ಕೋರ್ಸ್ ಅಥವಾ ಗಾಲ್ಫ್ ಕ್ಲಬ್ ಜಾಗ ಸರ್ಕಾರಕ್ಕೆ ಸೇರಿದ ಜಮೀನಾಗಿರುವುದು ಸರ್ಕಾರದ ಗಮನದಲ್ಲಿ ಇದೆಯೇ; | ಹೌದು |
| ಈ) | ಹಾಗಿದ್ದಲ್ಲಿ, ಶಕ್ತಿ ಸೌಧ ವಿಧಾನ ಸೌಧಕ್ಕೆ ಹತ್ತಿರವಿರುವ ಹಾಗೂ ಕೆಳಗಿನ ಎಲ್ಲಾ | ಸರ್ಕಾರದ ಆದೇಶ ಸಂಖ್ಯೆ:ಲೋಇ 150 ಬಿಎಂಎಸ್ 2008 (ಭಾಗ-2) |

| | | |
|---|---|---|
| | ನ್ಯಾಯಾಲಯಗಳಿಗೆ ಹಾಗೂ ವಕೀಲರಿಗೆ ಮತ್ತು ಕಕ್ಷಿದಾರರಿಗೆ ಅತ್ಯಲ್ಪ ಹತ್ತಿರವಿರುವ ಎಲ್ಲಾ ಸೌಲಭ್ಯಗಳನ್ನೊಳಗೊಂಡ ಸ್ಥಳವಾಗಿರುವುದರಿಂದ ಈ ಎರಡು ಜಾಗದಲ್ಲಿ ಒಂದನ್ನು ಆಯ್ಕೆ ಮಾಡಿಕೊಂಡು "ನೂತನ ತಂತ್ರಜ್ಞಾನದ ಆಧುನಿಕ ಹೈಕೋರ್ಟ್ ಕಟ್ಟಡ" ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆ ಏನು; ಈ ಬಗ್ಗೆ ಸರ್ಕಾರದ ಸ್ಪಷ್ಟ ಉತ್ತರ ನೀಡುವುದು? | ದಿನಾಂಕ:06.03.2023ರನ್ವಯ ಬೆಂಗಳೂರು ನಗರದ ಸ್ಯಾಂಕಿ ರಸ್ತೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ಜಮೀನನ್ನು ಬೆಂಗಳೂರು ಗಾಲ್ಫ್ ಕ್ಲಬ್‌ಗೆ ಮುಂದಿನ 30 ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡಲಾಗಿರುತ್ತದೆ.<br><br>ಬೆಂಗಳೂರು ಟರ್ಫ್ ಕ್ಲಬ್‌ಗೆ ಗುತ್ತಿಗೆಗೆ ನೀಡಲಾದ ಲೋಕೋಪಯೋಗಿ ಇಲಾಖೆಯ ಜಮೀನನ್ನು ಇಲಾಖೆಯ ವಶಕ್ಕೆ ಪಡೆಯಲು ಸರ್ಕಾರದ ಆದೇಶ ಸಂಖ್ಯೆ:ಲೋಇ 211 ಬಿಎಂಎಸ್ 2005, ದಿನಾಂಕ:25.09.2008ರಲ್ಲಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ವಿರುದ್ಧ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:30663/2009 ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ರೇಸ್‌ಕೋರ್ಸ್ ಕೋರ್ಸ್ ಆವರಣವನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ನೀಡುವಂತೆ ಆದೇಶಿಸಿರುತ್ತದೆ. ಬೆಂಗಳೂರು ಟರ್ಫ್ ಕ್ಲಬ್‌ನವರ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ವಿರುದ್ಧ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ SLP ಸಂಖ್ಯೆ:21157/2010ನ್ನು ದಾಖಲಿಸಿದ್ದು, ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ:07.09.2010ರ ತನ್ನ ಮಧ್ಯಂತರ ಆದೇಶದಲ್ಲಿ ಯಥಾಸ್ಥಿತಿ ಕಾಪಾಡಲು ಸೂಚಿಸಿರುತ್ತದೆ. ಪ್ರಸ್ತುತ ಸದರಿ ಪ್ರಕರಣವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಿವಿಲ್ ಅಪೀಲ್ ಪ್ರಕರಣ ಸಂಖ್ಯೆ :3263/2015, 3267/2015 ಮತ್ತು 3268/2015 ಎಂದು ದಾಖಲಾಗಿದ್ದು, ವಿಚಾರಣೆಗೆ ಬಾಕಿ ಇರುತ್ತದೆ. |

**ಸಂಖ್ಯೆ: ಲಾ-ಎಲ್‌ಸಿಇ/315/2025**

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು



File No. LAW-LCE/315/2025-ADMN1-LAW SEC (Computer No. 1987630)
Generated from eOffice by H K PATIL, MIN-LAW(HKP), MINISTER, MINISTER - LAW on 16/01/2026 01:01 PM